# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1048** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂಧ ಚುನಾಯಿತರಾದವರು)** |
| **ಉತ್ತರಿಸಬೇಕಾದ ದಿನಾಂಕ** | **25.08.2026** |
| **ಉತ್ತರಿಸುವ ಸಚಿವರು** | **ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು.** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಜಿಲ್ಲೆಯಲ್ಲಿ ಖಾಲಿ ಇರುವ ಪಶುವೈದ್ಯಕೀಯ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಭರ್ತಿಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | **ರಾಯಚೂರು ಜಿಲ್ಲೆಗೆ ಮಂಜೂರಾದ ಹುದ್ದೆಗಳ ವಿವರಗಳು ಈ ಕೆಳಕಂಡಂತಿದೆ.**<br><br>(table below)<br><br>ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 400 ಪಶುವೈದ್ಯಾಧಿಕಾರಿ ಖಾಯಂ ಹುದ್ದೆಗಳ ನೇರ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ.<br><br>ಅಲ್ಲದೆ ಹೆಚ್ಚುವರಿಯಾಗಿ 400 ಪಶುವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇರೆಗೆ ನೇಮಕಾತಿ ಮಾಡಿಕೊಳ್ಳುವ ಹಾಗೂ ರಾಜ್ಯದಲ್ಲಿ ಖಾಲಿ ಇರುವ 300 ಕಿರಿಯ ಪಶುವೈದ್ಯಕೀಯ ಪರೀಕ್ಷಕರ ಹುದ್ದೆಗಳನ್ನು ಹೊರಗುತ್ತಿಗೆ ಆಧಾರದ ಮೇರೆಗೆ ಭರ್ತಿ ಮಾಡುವ ಪ್ರಸ್ತಾವನೆಗಳಿಗೆ ಸಹಮತಿಗಾಗಿ ಕಡತವನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದೆ. |
| ಆ) | ರಾಯಚೂರು ನಗರದ ಮಲಿಯಾಬಾದ ಗೋಶಾಲಾ ಹತ್ತಿರ ಮಂಜೂರಾಗಿರುವ ಪಶು ಚಿಕಿತ್ಸಾಲಯ ನಿರ್ಮಾಣ ಕಾಮಗಾರಿ ಯಾವ ಹಂತದಲ್ಲಿ ಇದೆ; ಇಲ್ಲಿ ಸುಮಾರು 1000 ಗೋವುಗಳು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, | ರಾಯಚೂರು ನಗರದ ಮಲಿಯಾಬಾದ ಪಶು ಚಿಕಿತ್ಸಾಲಯದ ಕಟ್ಟಡ ನಿರ್ಮಿಸಲು ನಿವೇಶನ ಲಭ್ಯವಿಲ್ಲದ ಪ್ರಯುಕ್ತ, ಮಲಿಯಾಬಾದ ಗ್ರಾಮ ಪಂಚಾಯಿತಿಗೆ ಅಗತ್ಯ ನಿವೇಶನ ಗುರುತಿಸಿ ಇಲಾಖೆಗೆ ಹಸ್ತಾಂತರಿಸಲು ಕೋರಲಾಗಿರುತ್ತದೆ.<br><br>ಮಲಿಯಾಬಾದ ಗೋಶಾಲೆಯಲ್ಲಿ ಪ್ರಸ್ತುತ 398 ಗೋವುಗಳನ್ನು ನಿರ್ವಹಣೆ ಮಾಡಲಾಗುತ್ತಿದೆ. |

| ಮಂಜೂರು | ಖಾಯಂ ಭರ್ತಿ | ಗುತ್ತಿಗೆ/ ಹೊರಗುತ್ತಿಗೆ ಭರ್ತಿ | ಖಾಲಿ |
|---|---|---|---|
| 449 | 129 | 96 | 224 |

| | | |
|---|---|---|
| | ಈ ಸಂಸ್ಥೆಗೆ ಸರ್ಕಾರದಿಂದ ಅನುದಾನ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಸದರಿ ಗೋಶಾಲೆಯಲ್ಲಿ ಗೋವುಗಳ ನಿರ್ವಹಣೆಗೆ ಸರ್ಕಾರದಿಂದ ಪಿಂಜರಾಪೋಲ್ ಮತ್ತು ಇತರೆ ಗೋಶಾಲೆಗಳಿಗೆ ನೆರವು ನೀಡುವ ಯೋಜನೆಯಡಿ ಸಹಾಯಧನವನ್ನು ಪಡೆಯಲು ಅಗತ್ಯ ದಾಖಲಾತಿಗಳೊಂದಿಗೆ ಜಿಲ್ಲಾಧಿಕಾರಿ, ಜಿಲ್ಲಾ ಪ್ರಾಣಿ ದಯಾ ಸಂಘದ **(SPCA)** ಅನುಮೋದನೆಯೊಂದಿಗೆ ಅರ್ಜಿ ಸ್ವೀಕೃತಗೊಂಡಲ್ಲಿ ನಿಯಾಮನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. |

**(ಸಂಖ್ಯೆ: AHF/225/AID/2026)**

24/8

**(ಸಿ. ಪುಟ್ಟರಂಗಶೆಟ್ಟಿ)**

**ಪಶುಸಂಗೋಪನೆ ಮತ್ತು ರೇಷ್ಮೆ ಇಲಾಖೆ ಸಚಿವರು.**